ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2303

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 26.03.2021

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಕ್ಕಳ ಅಭಿವೃದ್ಧಿಗಾಗಿ ಯಾವ ರೀತಿಯ ಕಾರ್ಯಕ್ರಮಗಳನ್ನು ಇಲಾಖೆಯಲ್ಲಿ ನಡೆಸಲಾಗುತ್ತಿದೆ. ಇದರಿಂದ ಎಷ್ಟು ಮಕ್ಕಳಿಗೆ ಪ್ರಯೋಜನವಾಗಿದೆ; (ಕಳೆದ 2 ವರ್ಷಗಳ ಮಾಹಿತಿ ನೀಡುವುದು) | ಮಕ್ಕಳ ಅಭಿವೃದ್ಧಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ನಡೆಸಲಾಗುತ್ತಿರುವ ಕಾರ್ಯಕ್ರಮಗಳ ಕಳೆದ ಎರಡು ವರ್ಷಗಳ ಮಾಹಿತಿ ಈ ಕೆಳಕಂಡಂತಿವೆ. |

ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಅನುಷ್ಠಾನಗೊಳಿಸುವ ಯೋಜನೆಗಳು

| ಕ್ರ ಸಂ | ಯೋಜನೆಯ ಹೆಸರು | ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ | |
|---|---|---|---|
| | | 2018-19 | 2019-20 |
| 1 | ವಿಶೇಷ ಪಾಲನಾ ಯೋಜನೆ | 19300 | 17548 |
| 2 | ಪ್ರಾಯೋಜಕತ್ವ ಕಾರ್ಯಕ್ರಮ | 3,217 | 2078 |

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯದಿಂದ ಅನುಷ್ಠಾನಗೊಳಿಸುವ ಯೋಜನೆಗಳು

| ಕ್ರ ಸಂ | ಯೋಜನೆಯ ಹೆಸರು | ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ | |
|---|---|---|---|
| | | 2018-19 | 2019-20 |
| 1 | ಪೂರಕ ಪೌಷ್ಠಿಕ ಆಹಾರ | 3686771 | 4279858 |
| 2 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ | 10188 | 9506 |
| 3 | ದುಡಿಯುವ ಮಹಿಳೆಯರ ಮಕ್ಕಳಿಗಾಗಿ ಶಿಶು ಪಾಲನಾ ಕೇಂದ್ರಗಳು | 15275 | 15275 |
| 4 | ಭಾಗ್ಯಲಕ್ಷ್ಮಿ ಯೋಜನೆ | 144344 | 150569 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ನಗರ ಮತ್ತು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಬೇರೆ ಬೇರೆ ರೀತಿಯ ಕಾರ್ಯಕ್ರಮಗಳಿವೆಯೇ; (ವಿವರಗಳನ್ನು ನೀಡುವುದು) | ನಗರ ಮತ್ತು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಬೇರೆ ಬೇರೆ ರೀತಿಯ ಕಾರ್ಯಕ್ರಮಗಳಿರುವುದಿಲ್ಲ. |
| ಇ) | ಹೊಸದಾಗಿ ಮಕ್ಕಳ ಕಲ್ಯಾಣಕ್ಕಾಗಿ ಏನಾದರೂ ಯೋಜನೆಗಳನ್ನು ಸರ್ಕಾರ | 18 ವರ್ಷ ಮೇಲ್ಪಟ್ಟು ಮಕ್ಕಳ ಪಾಲನಾ ಸಂಸ್ಥೆಗಳಿಂದ ಬಿಡುಗಡೆಯಾಗುವ ಮಕ್ಕಳಿಗಾಗಿ 'ಉಪಕಾರ್' ಎಂಬ |

| | | |
|---|---|---|
| | ರೂಪಿಸಲಾಗಿದೆಯೇ (ವಿವರ ನೀಡುವುದು) | ಹೊಸ ಯೋಜನೆಯನು ಮಕ್ಕಳ ಕಲ್ಯಾಣಕ್ಕಾಗಿ 2020-21ನೇ ಸಾಲಿನಿಂದ ಜಾರಿಗೊಳಿಸಿದೆ.<br><br>ಸದರಿ ಯೋಜನೆಯಡಿ ಬಾಲನ್ಯಾಯ ಮಕ್ಕಳ (ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015ರನ್ವಯ ನೋಂದಾಯಿತ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ 18 ವರ್ಷ ಪೂರ್ಣಗೊಂಡ ಮಕ್ಕಳ ಮುಂದಿನ ಪುನರ್ವಸತಿಗಾಗಿ ಹಾಗೂ ಸಮಾಜದಲ್ಲಿ ಗೌರವಯುತವಾಗಿ ಮತ್ತು ಸ್ವತಂತ್ರವಾಗಿ ಜೀವನ ನಿರ್ವಹಿಸಲು ಅನುವಾಗುವಂತೆ ಹಾಗೂ ಅವರುಗಳು ಆರ್ಥಿಕ ಸ್ವಾವಲಂಬನೆಗೊಳ್ಳುವವರೆಗೆ ಅಥವಾ ಗರಿಷ್ಠ ಮೂರು ವರ್ಷಗಳ ಅವಧಿಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪ್ರತಿ ಫಲನುಭವಿಗೆ ಮಾಹೆಯಾನ ರೂ.5000/-ಗಳ ಆರ್ಥಿಕ ಸೌಲಭ್ಯ ಒದಗಿಸಲಾಗುವುದು,<br><br>2020-21ನೇ ಸಾಲಿನಲ್ಲಿ ಒಟ್ಟು 122 ಫಲಾನುಭವಿಗಳು ಯೋಜನೆಯ ಪ್ರಯೋಜನ ಪಡೆದಿರುತ್ತಾರೆ. |

ಸಂಖ್ಯೆ: ಮಮಇ 45 ಮಭಾಬ 2021

Halappa B.A

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.